**Bangalore**
**Regional News**
**16.10.2025: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ರಾಯಚೂರಿನ ಜವಳಗೇರಾ ಗ್ರಾಮದಲ್ಲಿ ರೈತ ತರಬೇತಿ ಮತ್ತು ಸೌಲಭ್ಯ ಕೇಂದ್ರ ಉದ್ಘಾಟಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್
2. ಬೆಂಗಳೂರು ನಗರದಲ್ಲಿ ವರ್ಷಕ್ಕೆ ೯೪೩ ಟನ್ ಅನ್ನ ವ್ಯರ್ಥ - ಮುಖ್ಯಮಂತ್ರಿ ಸಿದ್ದರಾಮಯ್ಯ ಕಳವಳ
3. ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಸರ್ಕಾರಿ ನೌಕರರ ಭಾಗವಹಿಸುವಿಕೆ ನಿಷೇಧಿಸುವಂತೆ ಮುಖ್ಯಮಂತ್ರಿಗೆ ಸಚಿವ ಪ್ರಿಯಾಂಕ್ ಖರ್ಗೆ ಪತ್ರ
4. ಶಾಸಕರ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡದಂತೆ ಸರ್ಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹ
5. ರಾಜಧಾನಿಯಲ್ಲಿ ಪ್ರಮುಖ ನೂರು ರಸ್ತೆಗಳನ್ನು ಗುರುತಿಸಿ ಸಮಗ್ರ ಅಭಿವೃದ್ಧಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ನಿರ್ಧಾರ

*********

ಕೃಷಿಯಿಂದ ರೈತರ ಆದಾಯವನ್ನು ಹೆಚ್ಚಿಸಲು ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭರವಸೆ ನೀಡಿದ್ದಾರೆ. ರಾಯಚೂರು ಜಿಲ್ಲೆಯ ಜವಳಗೇರಾ ಗ್ರಾಮದಲ್ಲಿ ರೈತ ತರಬೇತಿ ಮತ್ತು ಸೌಲಭ್ಯ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಉತ್ಪನ್ನಗಳನ್ನು ಖರೀದಿಸಲು ಕನಿಷ್ಠ ಬೆಂಬಲ ಬೆಲೆ ಖಾತರಿಪಡಿಸಲಾಗಿದೆ. ಮಣ್ಣಿನ ಆರೋಗ್ಯ ಕಾರ್ಡ್ ಒದಗಿಸಲಾಗಿದ್ದು, ಕೃಷಿ ಸಿಂಚಾಯಿ ಯೋಜನೆಯಡಿ ರಾಜ್ಯಗಳಿಗೆ ಆರ್ಥಿಕ ನೆರವು ನೀಡಲಾಗಿದೆ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರದಿಂದ ವಿಶೇಷ ಬೆಂಬಲ ಪಡೆದ ದೇಶದ ೧೧೨ ಮಹತ್ವಾಕಾಂಕ್ಷೆಯ ಜಿಲ್ಲೆಗಳಲ್ಲಿ ರಾಯಚೂರು ೨೦೨೪ರ ಕಾರ್ಯ ಕ್ಷಮತೆಯಲ್ಲಿ ಅಗ್ರಸ್ಥಾನದಲ್ಲಿದೆ. ಮಸ್ಕಿ ತಾಲೂಕು ಅದೇ ಜಿಲ್ಲೆಯಲ್ಲಿ ಅಗ್ರಸ್ಥಾನದಲ್ಲಿದೆ ಎಂದು ಸಚಿವರು ಸಂತಸ ವ್ಯಕ್ತಪಡಿಸಿದ್ದಾರೆ.

***ಧ್ವನಿ ***

ಇಂದು ಸಚಿವೆ ನಿರ್ಮಲಾ ಸೀತಾರಾಮನ್, ಬಳ್ಳಾರಿಯ ಬಾಗೇವಾಡಿಯಲ್ಲಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಲಿದ್ದಾರೆ ಹಾಗೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ನಾಳೆ ಅವರು, ವಿಜಯನಗರದ ಕೂಡ್ಲಿಗಿಯಲ್ಲಿ, ರೈತ ತರಬೇತಿ ಕೇಂದ್ರ ಹಾಗೂ ಕೃಷಿ ಸಂಸ್ಕರಣ ಘಟಕವನ್ನು ಉದ್ಘಾಟಿಸಲಿದ್ದಾರೆ.

*********

ಬೆಂಗಳೂರು ನಗರ ಒಂದರಲ್ಲೇ ವರ್ಷಕ್ಕೆ ೯೪೩ ಟನ್ ಅನ್ನ ವ್ಯರ್ಥವಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಳವಳ ವ್ಯಕ್ತಪಡಿಸಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಬೆಂಗಳೂರಿನ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ವಿಶ್ವ ಆಹಾರ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಿಕೆವಿಕೆ ಅಧ್ಯಯನದಲ್ಲಿ ವರ್ಷಕ್ಕೆ ಸುಮಾರು ೩೬೦ ಕೋಟಿ ಮೌಲ್ಯದ ಆಹಾರ ವ್ಯರ್ಥವಾಗುತ್ತಿದೆ ಎಂಬುದನ್ನು ಉಲ್ಲೇಖಿಸಲಾಗಿದೆ. ಅನ್ನವನ್ನು ಚೆಲ್ಲುವುದು ಅನ್ನಬ್ರಹ್ಮನಿಗೆ ಮಾಡುವ ಅವಮಾನ ಎಂದು ಅಭಿಪ್ರಾಯಪಟ್ಟಿದ್ದಾರೆ. ಹಸಿವಿನ ಸಂಕಟ ಅನ್ನದ ಮೌಲ್ಯ ತಿಳಿದಿರುವುದರಿಂದಲೇ ಅನ್ನಭಾಗ್ಯ ಯೋಜನೆ ಜಾರಿಗೆ ತರಲಾಗಿದೆ ಎಂದು ಸಮರ್ಥಿಸಿಕೊಂಡರು. ಇದೇ ವೇಳೆ ಅನ್ನಭಾಗ್ಯದ ಅಕ್ಕಿಯನ್ನು ಸಂಗ್ರಹಿಸಿ, ಕಾಳಸಂತೆಯಲ್ಲಿ ಮಾರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಆಹಾರದ ಬಗ್ಗೆ ಜಾಗ್ರತೆ, ಸಣ್ಣ ರೈತರ ರಕ್ಷಣೆ, ನಾಗರಿಕ ಸಮಾಜದ ಜವಾಬ್ದಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ.

*********

ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಚಟುವಟಿಕೆಗಳಲ್ಲಿ ಸರ್ಕಾರಿ ನೌಕರರ ಭಾಗವಹಿಸುವಿಕೆಯನ್ನು ನಿಷೇಧಿಸುವಂತೆ ಕೋರಿ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಸರ್ಕಾರಿ ಅಧಿಕಾರಿಗಳು, ಆರ್‌ಎಸ್‌ಎಸ್‌ಗೆ ಬೆಂಬಲ ನೀಡುವುದನ್ನು ನಿರ್ಬಂಧಿಸಬೇಕು ಎಂದು ಒತ್ತಾಯಿಸಿದ್ದಾರೆ. ಕೆಲವು ಸರ್ಕಾರಿ ಅಧಿಕಾರಿಗಳು ಮತ್ತು ನೌಕರರು ಭಾಗವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಹಾಗೂ ನೌಕರರು ಆರ್‌ಎಸ್‌ಎಸ್ ಮತ್ತು ಇತರ ಸಂಸ್ಥೆಗಳು ಆಯೋಜಿಸುವ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ನಿಷೇಧಿಸುವಂತೆ ಸುತ್ತೋಲೆ ಹೊರಡಿಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

*********

ಶಾಲಾ ಆವರಣವನ್ನು ಖಾಸಗಿ ಉದ್ದೇಶಗಳಿಗಾಗಿ ಬಳಸುವುದನ್ನು ನಿಷೇಧಿಸಲಾಗಿದೆ. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಚೇರಿ ಹೊರಡಿಸಿದ ಹಳೆಯ ಸುತ್ತೋಲೆಯನ್ನು ಸರ್ಕಾರ ಮರು ಬಿಡುಗಡೆ ಮಾಡಿದೆ. ಈ ಸುತ್ತೋಲೆ ಪ್ರಕಾರ ಸರ್ಕಾರಿ ಶಾಲಾ ಮೈದಾನಗಳನ್ನು ಖಾಸಗಿ ಉದ್ದೇಶಗಳಿಗಾಗಿ ಬಳಸುವುದನ್ನು ನಿಷೇಧಿಸಿದೆ. ೨೦೧೩ ಫೆಬ್ರವರಿ ೭ರಂದು ಹೊರಡಿಸಿದ್ದ ಸುತ್ತೋಲೆಯಲ್ಲಿ ಸರ್ಕಾರಿ ಶಾಲಾ ಮೈದಾನಗಳು ಮತ್ತು ಆವರಣಗಳನ್ನು ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ, ಇತರ ಚಟುವಟಿಕೆಗಳಿಗೆ ಬಳಸಬಾರದು ಎಂದು ಸ್ಪಷ್ಟವಾಗಿ ತಿಳಿಸಲಾಗಿದೆ.

*********

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಕ್ಷೇತ್ರವಾರು ಶಾಸಕರಿಗೆ ಅನುದಾನ ಹಂಚಿಕೆಯಲ್ಲಿ ತಾರತಮ್ಯ ನೀತಿ ಅನುಸರಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಚಿತ್ರದುರ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡೂವರೆ ವರ್ಷಗಳಿಂದ ರಾಜ್ಯ ಸರ್ಕಾರ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡುತ್ತಿದ್ದು, ಇದರಿಂದ ಜೆಡಿಎಸ್ ಹಾಗೂ ಬಿಜೆಪಿ ಶಾಸಕರು ಪ್ರತಿನಿಧಿಸುವ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತಗೊಂಡಿವೆ. ಸರ್ಕಾರ ಎಲ್ಲ ಕ್ಷೇತ್ರಗಳಿಗೂ ಸಮಾನ ಅನುದಾನ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

*********

ಬೆಂಗಳೂರಿನಲ್ಲಿ ೨೪ ವಾರಗಳ ಕಠಿಣ ನೇಮಕಾತಿ ತರಬೇತಿ ಬಳಿಕ ಇಂದು ೨೭೬ ಅಗ್ನಿವೀರರನ್ನು ಒಳಗೊಂಡ ಆಕರ್ಷಕ ಪಥಸಂಚಲನ ನಡೆಯಿತು. ಪ್ಯಾರಾಚೂಟ್ ರೆಜಿಮೆಂಟ್ ತರಬೇತಿ ಕೇಂದ್ರದ ಕಮಾಂಡೆಂಟ್ ಬ್ರಿಗೇಡಿಯರ್ ಯೋಗೇಶ್ ಶರ್ಮಾ ಪಥಸಂಚಲನ ವೀಕ್ಷಿಸಿದರು. ಅಗ್ನಿವೀರರನ್ನು ಉದ್ದೇಶಿಸಿ ಮಾತನಾಡಿದ ಬ್ರಿಗೇಡಿಯರ್ ಯೋಗೇಶ್ ಶರ್ಮಾ, ಕಮಾಂಡೆಂಟ್, "ಇಮಾನ್ ದಾರಿ, ವಫದಾರಿ, ಬಹದ್ದೂರಿ" ಎಂಬ ನೀತಿಯನ್ನು ಅಳವಡಿಸಿಕೊಳ್ಳಲು ಯೋಧರಿಗೆ ಕರೆ ನೀಡಿದರು. ಹಾಜರಾತಿ ಮತ್ತು ಶಿಸ್ತಿನ ಪಥಸಂಚಲನಕ್ಕಾಗಿ ಅವರು ಅಗ್ನಿವೀರರನ್ನು ಶ್ಲಾಘಿಸಿದರು. ಪಥಸಂಚಲನವನ್ನು ಕೇರಳದ ಅಗ್ನಿವೀರ್ ಶರತ್ ಎಸ್ ನಾಯರ್ ಮುನ್ನಡೆಸಿದರು. ಅಗ್ನಿಪಥ್ ಯೋಜನೆಯ ಅಗ್ನಿವೀರರ ಆರನೇ ಬ್ಯಾಚ್‌ನ ಈ ಯೋಧರು ಭಾರತದ ಪ್ಯಾರಾಚೂಟ್ ರೆಜಿಮೆಂಟ್‌ನಲ್ಲಿ ತರಬೇತಿ ಪಡೆದಿದ್ದು, ಆಯ್ಕೆಯ ಅವಧಿಗೆ ನಿಗದಿಪಡಿಸಿದ ವಿಶೇಷ ಪಡೆಗಳ ಘಟಕಗಳಿಗೆ ತೆರಳಲಿದ್ದಾರೆ.

*********

ಇಂದು ವಿಶ್ವ ಮಾನದಂಡಗಳ ದಿನ. ಈ ಹಿನ್ನೆಲೆಯಲ್ಲಿ ಕೇಂದ್ರ ಸಣ್ಣ ಹಾಗೂ ಸೂಕ್ಷ್ಮ ಕೈಗಾರಿಕೆಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಬೆಂಗಳೂರಿನಲ್ಲಿ ನಡೆದ ವಿಶ್ವ ಮಾನದಂಡಗಳ ದಿನದ ಕಾರ್ಯಕ್ರಮ ಉದ್ಘಾಟಿಸಿದರು.

*********

ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಪ್ರಮುಖ ನೂರು ರಸ್ತೆಗಳನ್ನು ಗುರುತಿಸಿ, ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವ ಸಲುವಾಗಿ ಯೋಜನೆ ರೂಪಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ನಗರದಲ್ಲಿ ರಸ್ತೆ ಪಾದಚಾರಿ ಮಾರ್ಗಗಳ ಅಭಿವೃದ್ಧಿ ಹಾಗೂ ಸ್ವಚ್ಛತೆಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಐದು ನಗರ ಪಾಲಿಕೆಗಳಿಗೆ ಹತ್ತು ರಸ್ತೆಗಳಂತೆ ಹತ್ತು ವಲಯಗಳಿಗೆ ನೂರು ರಸ್ತೆಗಳನ್ನು ಗುರುತಿಸಿ, ಸಮಗ್ರ ಅಭಿವೃದ್ಧಿ ಯೋಜನೆ ರೂಪಿಸಲು ನಿರ್ದೇಶನ ನೀಡಿದ್ದಾರೆ. ನಗರದ ಹೊರ ವರ್ತುಲ ರಸ್ತೆಗಳಲ್ಲಿರುವ ರಸ್ತೆ ಗುಂಡಿಗಳನ್ನು ಆದ್ಯತೆ ಮೇರೆಗೆ ಮುಚ್ಚಬೇಕು ಹಾಗೂ ವೈಟ್‌ಟಾಪಿಂಗ್ ರಸ್ತೆಗಳನ್ನು ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ಸುಸ್ಥಿತಿಯಲ್ಲಿ ಇರಿಸಲು ಕ್ರಮ ವಹಿಸಬೇಕು ಎಂದು ತಿಳಿಸಿದ್ದಾರೆ.

*********

ನೂತನವಾಗಿ ರಾಜ್ಯ ಮಾಹಿತಿ ಆಯುಕ್ತರಾಗಿ ನೇಮಕವಾಗಿರುವ ಡಾ. ರಿಚರ್ಡ್ ವಿನ್ಸೆಂಟ್ ಡಿಸೋಜ, ಬಿ. ವೆಂಕಟ್ ಸಿಂಗ್ ಹಾಗೂ ಡಾ. ಮಹೇಶ್ ವಾಳ್ವೇಕರ್ ಇಂದು ಪ್ರಮಾಣ ವಚನ ಸ್ವೀಕರಿಸಿದರು. ರಾಜಭವನದ ಬ್ಯಾಂಕ್ವೇಟ್ ಸಭಾಂಗಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನೂತನವಾಗಿ ನೇಮಕವಾಗಿರುವ ರಾಜ್ಯ ಮಾಹಿತಿ ಆಯುಕ್ತರುಗಳಿಗೆ ಅಧಿಕಾರದ ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭದಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾದ ಅಶಿತ್ ಮೋಹನ್ ಪ್ರಸಾದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರುಗಳು ಹಾಗೂ ಮಾಹಿತಿ ಆಯೋಗದ ನಿವೃತ್ತ ಮಾಹಿತಿ ಆಯುಕ್ತರು ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

*********

ತೆಂಕುತಿಟ್ಟಿನ ಯಕ್ಷಗಾನ ಕಲಾವಿದ, ಹಿರಿಯ ಭಾಗವತ ದಿನೇಶ್ ಅಮ್ಮಣ್ಣಾಯ ನಿಧನ ಹೊಂದಿದ್ದಾರೆ. ಬೆಳ್ತಂಗಡಿ ತಾಲೂಕಿನ ಹತ್ಯಡ್ಕ ಗ್ರಾಮದ ಅರಸಿನಮಕ್ಕಿಯ ಹೊಸ್ತೋಟ ಪಾಳ್ಯದವರಾದ ಇವರು, ಪತ್ನಿ ಹಾಗೂ ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಕೇವಲ ಪೌರಾಣಿಕ ಪ್ರಸಂಗಗಳಿಗಷ್ಟೇ ಅಲ್ಲದೆ, ಅನೇಕ ತುಳು ಪ್ರಸಂಗಗಳಿಗೂ ಧ್ವನಿಯಾಗಿ ಅಪಾರ ಜನಮನ್ನಣೆ ಗಳಿಸಿದ್ದರು. ಕಾಡಮಲ್ಲಿಗೆ, ಕಚ್ಚೂರ ಮಾಲ್ದಿ, ಪಟ್ಟದ ಪದ್ಮಲೆ, ಮಾನಿಷಾದಂತಹ ಪ್ರಸಂಗಗಳನ್ನು ತಮ್ಮ ಗಾಯನದಿಂದ ಜನಪ್ರಿಯಗೊಳಿಸಿದ ಕೀರ್ತಿ ಅವರದ್ದಾಗಿತ್ತು. ಕರ್ನಾಟಕ ಮಾತ್ರವಲ್ಲದೇ ಮುಂಬೈನಲ್ಲೂ ಇವರು ಅಪಾರ ಅಭಿಮಾನಿಗಳನ್ನು ಹೊಂದಿದ್ದರು.

******END******